ವಿಜಯವಾಣಿ
ಕನ್ನಡಿಗರ ಧ್ವನಿ

**Wednesday 08th February 2023, Page No.6**

**Award to RV College NCC**



# ಆರ್.ವಿ. ಕಾಲೇಜ್ ಎನ್‌ಸಿಸಿಗೆ ಪ್ರಶಸ್ತಿ

## ಡಿಡಿಜಿ ಪುರಸ್ಕಾರಕ್ಕೆ ಪಾತ್ರ | ಬಿ.ಎಸ್. ಕನ್ವರ್ ಅವರಿಂದ ಪ್ರದಾನ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ರಾಜ್ಯದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಒಂದೆನಿಸಿರುವ ನಗರದ ಆರ್.ವಿ. ಇಂಜಿನಿಯರಿಂಗ್ ಕಾಲೇಜಿನ ಎನ್‌ಸಿಸಿ ವಿಭಾಗವು ಬೆಸ್ಟ್ ಇನ್‌ಸ್ಟಿಟ್ಯೂಟ್ ಅವಾರ್ಡ್ ಪ್ರಶಸ್ತಿಗೆ ಭಾಜನವಾಗಿದೆ.

ಇತ್ತೀಚೆಗೆ ನವದೆಹಲಿಯಲ್ಲಿ ನಡೆದ ಗಣರಾಜ್ಯೋತ್ಸವ ಪರೇಡ್‌ನಲ್ಲಿ ಆರ್.ವಿ. ಇಂಜಿನಿಯರಿಂಗ್ ಕಾಲೇಜಿನ 6 ಮಂದಿ ಎನ್‌ಸಿಸಿ ಕೆಡೆಟ್‌ಗಳು ಭಾಗಿಯಾಗಿದ್ದರು. ಜತೆಗೆ ಎನ್‌ಸಿಸಿ ಚಟುವಟಿಕೆಯಲ್ಲಿ ಕಾಲೇಜಿನ ಸಾಧನೆ ಆಧರಿಸಿ ಕರ್ನಾಟಕ-ಗೋವಾ ಎನ್‌ಸಿಸಿ ನಿರ್ದೇಶನಾಲಯದ 2023ನೇ ಸಾಲಿನ ಡಿಡಿಜಿ ಪುರಸ್ಕಾರಕ್ಕೆ ಪಾತ್ರವಾಗಿದೆ.

ಕೊತ್ತನೂರಿನಲ್ಲಿರುವ ಕ್ರಿಸ್ತು ಜಯಂತಿ ಕಾಲೇಜಿನಲ್ಲಿ ಮಂಗಳವಾರ ಆಯೋಜಿಸಿದ್ದ ಸಮಾರಂಭದಲ್ಲಿ ಕರ್ನಾಟಕ- ಗೋವಾ ಎನ್‌ಸಿಸಿ ನಿರ್ದೇಶನಾಲಯದ ಡೆಪ್ಯೂಟಿ ಡೈರೆಕ್ಟರ್ ಜನರಲ್ ಬಿ.ಎಸ್. ಕನ್ವರ್ ಅವರು ಆರ್.ವಿ. ಇಂಜಿನಿಯರಿಂಗ್ ಕಾಲೇಜಿನ ತಂಡಕ್ಕೆ ಪ್ರಶಸ್ತಿಯನ್ನು ವಿತರಿಸಿದರು. ಈ ಸಂದರ್ಭದಲ್ಲಿ ಆರ್.ವಿ. ಕಾಲೇಜಿನ ಪ್ರಾಂಶುಪಾಲ ಡಾ. ಕೆ.ಎನ್. ಸುಬ್ರಹ್ಮಣ್ಯ ಹಾಗೂ ಎನ್‌ಸಿಸಿ ವಿಭಾಗದ ಮುಖ್ಯಸ್ಥ ಕ್ಯಾಪ್ಟನ್ ಮಹೇಂದ್ರಕುಮಾರ್ ಹಾಜರಿದ್ದರು.

ಇದೇ ವೇಳೆ ಗಣರಾಜ್ಯೋತ್ಸವ ಪರೇಡ್‌ನಲ್ಲಿ ಭಾಗವಹಿಸಿ ಉತ್ತಮ ಪ್ರದರ್ಶನ ನೀಡಿದ ಎನ್‌ಸಿಸಿ ಕೆಡೆಟ್‌ಗಳಿಗೆ ವೈಯಕ್ತಿಕ, ವಿಭಾಗ ಹಾಗೂ ತಂಡಗಳಿಗೆ ರಾಜ್ಯ ಮಟ್ಟದ ಪ್ರಶಸ್ತಿಗಳನ್ನು ವಿತರಿಸಲಾಯಿತು. ಎನ್‌ಸಿಸಿ ಕೆಡೆಟ್‌ಗಳು ಭಾವೈಕ್ಯತೆ ಸಾರುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟು ವೀಕ್ಷಕರ ಮೆಚ್ಚುಗೆಗೆ ಪಾತ್ರವಾದರು.



ಕ್ರಿಸ್ತು ಜಯಂತಿ ಕಾಲೇಜಿನಲ್ಲಿ ಮಂಗಳವಾರ ಆಯೋಜಿಸಿದ್ದ ಸಮಾರಂಭದಲ್ಲಿ ಆರ್.ವಿ. ಇಂಜಿನಿಯರಿಂಗ್ ಕಾಲೇಜಿನ ಎನ್‌ಸಿಸಿ ಕೆಡೆಟ್‌ಗಳಿಗೆ ಡೆಪ್ಯೂಟಿ ಡೈರೆಕ್ಟರ್ ಜನರಲ್ ಬಿ.ಎಸ್. ಕನ್ವರ್ ಪ್ರಶಸ್ತಿ ಪ್ರದಾನ ಮಾಡಿದರು.

### ದಾಖಲೆ ಸೃಷ್ಟಿಸಿರುವ ಕೆಡೆಟ್‌ಗಳು

ರಾಷ್ಟ್ರಮಟ್ಟದ ಗಣರಾಜ್ಯೋತ್ಸವ ಪರೇಡ್‌ನಲ್ಲಿ ಆರ್.ವಿ. ಕಾಲೇಜಿನ ಎನ್‌ಸಿಸಿ ಕೆಡೆಟ್‌ಗಳು 2017, 2018, 2019, 2022 ಹಾಗೂ 2023ರಲ್ಲಿ ಭಾಗವಹಿಸಿ ದಾಖಲೆ ಸೃಷ್ಟಿಸಿದ್ದಾರೆ. ಈವರೆಗೆ 17 ಕೆಡೆಟ್‌ಗಳು ಪರೇಡ್‌ನಲ್ಲಿ ಪಾಲ್ಗೊಂಡು ಕಾಲೇಜಿಗೆ ಕೀರ್ತಿ ತಂದಿದ್ದಾರೆ. ಈ ಬಾರಿ ಕಾಲೇಜಿನ ಅಪರ್ಣಾ ಕಶ್ಯಪ್ ಅಖಿಲ ಭಾರತ ಅತ್ಯುತ್ತಮ ಕೆಡೆಟ್ ವಿಭಾಗದಲ್ಲಿ ಕಂಚಿನ ಪದಕವನ್ನು ಪಡೆದಿದ್ದಾರೆ. ಜತೆಗೆ ಎಚ್.ಸಿ. ಚಿಂತನ್ , ದೀಪ್ ಶಿಲ್ ಪ್ರದೀಪ್, ಆರ್. ಪ್ರಜ್ವಲ್ , ಸಂಜಯ್ ರಾಜು ಹಾಗೂ ಸೀಮಾ ತೆಂಡೂಲ್ಕರ್ ಭಾಗವಹಿಸಿದ್ದರು. 2016ರಿಂದ ಸಂಸ್ಥೆಯಲ್ಲಿ ಎನ್‌ಸಿಸಿ ವಿಭಾಗ ತೆರೆದಿದ್ದು ಈವರೆಗೆ ಒಟ್ಟು 250ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸಕ್ರಿಯವಾಗಿ ಪಾಲ್ಗೊಂಡು ವಿವಿಧ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ ಎಂದು ಆರ್.ವಿ. ಕಾಲೇಜು ಎನ್‌ಸಿಸಿ ವಿಭಾಗದ ಮುಖ್ಯಸ್ಥ ಕ್ಯಾಪ್ಟನ್ ಮಹೇಂದ್ರ ಕುಮಾರ್ ತಿಳಿಸಿದರು.

ಸಂಸ್ಥೆಯ ಎನ್‌ಸಿಸಿ ವಿದ್ಯಾರ್ಥಿಗಳು ರಾಷ್ಟ್ರ ಮಟ್ಟದ ಗಣರಾಜ್ಯೋತ್ಸವ ಪರೇಡ್‌ನಲ್ಲಿ ಪಾಲ್ಗೊಂಡು ಪ್ರಶಸ್ತಿ ಪಡೆದಿರುವುದು ಹೆಮ್ಮೆಯ ವಿಚಾರವಾಗಿದೆ. ಪ್ರಸ್ತುತ 80 ವಿದ್ಯಾರ್ಥಿಗಳು ಎನ್‌ಸಿಸಿಯಲ್ಲಿದ್ದು, 33 ವಿದ್ಯಾರ್ಥಿನಿಯರಿದ್ದಾರೆ. ಇವರ ವ್ಯಾಸಂಗಕ್ಕೆ ಅಡ್ಡಿಯಾಗದಿರಲು ಪ್ರತ್ಯೇಕವಾಗಿ ಪರೀಕ್ಷೆಗೂ ಅವಕಾಶ ಮಾಡಿಕೊಡಲಾಗಿದೆ.

| ಡಾ. ಕೆ.ಎನ್. ಸುಬ್ರಹ್ಮಣ್ಯ
ಪ್ರಾಂಶುಪಾಲ, ಆರ್.ವಿ. ಇಂಜಿನಿಯರಿಂಗ್ ಕಾಲೇಜು